



ಅರುಣ ಪಿ. ಭಟ್ಟ

## ವಾರಭವಿಷ್ಯ: 04.08.2022ರಿಂದ 10.08.2022ರವರೆಗೆ




ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಸಾಧ್ಯತೆ ಇದೆ. ಉದ್ಯೋಗ ಹಾಗೂ ವೃತ್ತಿಗೆ ಸಂಬಂಧಿಸಿದಂತೆ ವಾರದ ಶುರುವಿನಿಂದಲೂ ಕೆಲವು ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ. ಇತರ ಸ್ಥಳದಲ್ಲಿ ನಡೆಯುತ್ತಿರುವ ಕೆಲಸಗಳನ್ನು ನಿರ್ವಹಿಸಲು ನಿಮ್ಮನ್ನು ನಿಯೋಜನೆ ಮಾಡಬಹುದು. ಇದನ್ನು ಅವಕಾಶವಾಗಿ ಬಳಸಿಕೊಳ್ಳುವುದರಲ್ಲಿ ಬಿಡುವಿಲ್ಲದಂತೆ ಆಗುತ್ತದೆ. ಶುಭದಿನ 10. ಗಣಪತಿಗೆ ದೂರ್ವಾರ್ಚನೆ ಮಾಡಿಸಿರಿ.

ವಾರದ ಶುರುವಿನಿಂದ ಉತ್ಸಾಹದಿಂದ ಕಾಣಿಸಿಕೊಳ್ಳುತ್ತೀರಿ. ನಿಮ್ಮ ವೈಯಕ್ತಿಕ ಶ್ರಮದಿಂದ ಹೆಚ್ಚಿನ ಯಶಸ್ಸು ಪಡೆಯಲು ಸಾಧ್ಯವಾಗುತ್ತದೆ. ಇದರಿಂದ ನಿಮಗೆ ಸಂತುಷ್ಟವಾಗುತ್ತದೆ. ಇನ್ನು ನಿಮ್ಮ ಸಹೋದ್ಯೋಗಿಗಳ ಜತೆಗೆ ಇರುವ ಭಿನ್ನಾಭಿಪ್ರಾಯಗಳನ್ನು ಮರೆಯಲು ಪ್ರಯತ್ನ ಮಾಡುತ್ತೀರಿ. ನಿಮ್ಮ ಕಾರ್ಯಗಳ ವಿಸ್ತರಣೆಗೆ ತೀರ್ಮಾನವೊಂದನ್ನು ಕೈಗೊಳ್ಳಲಿದ್ದೀರಿ. ಶುಭದಿನ 05. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.







ಹಣಕಾಸಿನ ಸಂಸ್ಥೆಗಳ ಜತೆಗೆ ಒಪ್ಪಂದ ಮಾಡಿಕೊಳ್ಳುವ ಸಾಧ್ಯತೆ. ನಿಮ್ಮ ವ್ಯವಹಾರ ಬಲಪಡಿಸುವ ಸಲುವಾಗಿ ಹೆಚ್ಚು ಶ್ರಮ ಹಾಕಲಿದ್ದೀರಿ. ಹೆಚ್ಚಿನ ಹಣವನ್ನು ಖರ್ಚು ಮಾಡಲಿದ್ದೀರಿ. ಮತ್ತು ಈ ಹಣವನ್ನು ಹೊಂದಿಸುವ ಸಲುವಾಗಿ ಹಣಕಾಸು ಸಂಸ್ಥೆಗಳಿಂದ ಬಂಡವಾಳ ತರಲಿದ್ದೀರಿ. ಈ ಪ್ರಯತ್ನದಲ್ಲಿ ನಿಮಗೆ ಯಶಸ್ಸು ದೊರೆಯುವ ಸಾಧ್ಯತೆ ಇದೆ. ಶುಭದಿನ 09. ಚಾಮುಂಡಿ ಸ್ತುತಿ ವನದುರ್ಗಾ ಆರಾಧನೆ ಮಾಡಿರಿ.

ನಿಮ್ಮ ಮಗ ಅಥವಾ ಮಗಳ ಪ್ರಗತಿ, ಏಳ್ಗೆಯಿಂದ ಮನಸಿಗೆ ಸಂತಸವಾಗುತ್ತದೆ. ಅವರು ತಮ್ಮ ಪಾಲಿನ ಜವಾಬ್ದಾರಿಯನ್ನು ತುಂಬ ಅಚ್ಚುಕಟ್ಟಾಗಿ ಮಾಡುತ್ತಿರುವುದನ್ನು ಗಮನಿಸುತ್ತೀರಿ. ಆದಾಯ ಮೂಲಗಳು ಹೆಚ್ಚಿಸಿಕೊಳ್ಳುವುದರಲ್ಲಿ ಸಫಲರಾಗಲಿದ್ದು, ಅದರಿಂದ ಅನುಕೂಲ ದೊರೆಯಲು ಆರಂಭವಾಗುತ್ತದೆ. ನಿಮ್ಮ ಉತ್ಸಾಹ ಸಂತಸವನ್ನು ಸೃಷ್ಟಿ ಮಾಡುತ್ತದೆ. ಶುಭದಿನ 05. ಹನುಮಾನ್ ಚಾಲಿಸ್ ಪಠಿಸಿರಿ.







ವಾರದ ಶುರುವಿನಿಂದಲೇ ಅಂದುಕೊಂಡ ಕೆಲಸಗಳನ್ನು ಪೂರ್ಣಗೊಳಿಸಲು ಸಾಧ್ಯವಾಗುತ್ತದೆ. ಜತೆಗೆ ಕೆಲಸ ಕಾರ್ಯಗಳಲ್ಲಿ ಆಗುತ್ತಿರುವ ಪ್ರಗತಿ ಬಗ್ಗೆ ತೃಪ್ತಿ ಮೂಡುತ್ತದೆ. ನಿಮ್ಮ ಮೇಲಧಿಕಾರಿಗಳಿಗೆ ಕೆಲಸದ ಪ್ರಗತಿ ಬಗ್ಗೆ ವರದಿ ನೀಡುತ್ತೀರಿ. ಉದ್ಯೋಗ ಜೀವನದಲ್ಲಿ ಹೆಮ್ಮೆ ಪಡುವಂಥ ಸನ್ನಿವೇಶ ಇದಾಗಿರುತ್ತದೆ. ಆರೋಗ್ಯ ಉತ್ತಮವಾಗಿರುತ್ತದೆ. ಶುಭದಿನ 06. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.

ಪುಣ್ಯಕ್ಷೇತ್ರಕ್ಕೆ ತೆರಳುವ ಸಾಧ್ಯತೆ. ಅಗತ್ಯಕ್ಕೆ ತಕ್ಕಂತೆ ಈ ವಾರ ಕೆಲ ನಿಯಮಗಳನ್ನು ಅಳವಡಿಸಿಕೊಳ್ಳಲಿದ್ದೀರಿ. ಹೆಚ್ಚಿನ ಶ್ರಮ ಹಾಕಬೇಕಾಗುತ್ತದೆ. ಕೆಲವು ಕೆಲಸಗಳನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ನಿಮ್ಮ ಸೋದರ ಸೋದರಿ ಸಹಾಯಕ್ಕೆ ನಿಲ್ಲುತ್ತಾರೆ. ಅದಕ್ಕಾಗಿ ಅವರಿಗೆ ಗೌರವ ಹಾಗೂ ಅಧಿಕಾರ ನೀಡುತ್ತೀರಿ. ಮನೆಯಲ್ಲಿ ಸಂತಸದ ವಾತಾವರಣ ಇರುತ್ತದೆ. ಶುಭದಿನ 04. ಆದಿತ್ಯ ಹೃದಯ ಪಠಿಸಿರಿ.







ಕುಟುಂಬ ಸದಸ್ಯರ ಜತೆಗೆ ಹೆಚ್ಚಿನ ಸಮಯ ಕಳೆಯುವ ಸಾಧ್ಯತೆ ಇದೆ. ಈ ವಾರ ಹೆಚ್ಚು ಚಟುವಟಿಕೆಯಿಂದ ನೀವು ಇರಬೇಕಾಗುತ್ತದೆ. ಭೂ ವ್ಯಾಜ್ಯವೊಂದಕ್ಕೆ ಶ್ರಮ ಹಾಕಲಿದ್ದೀರಿ. ಆದರೆ ವಿರೋಧಿ ಪಾಳಯದವರು ಈ ವಿಚಾರದಲ್ಲಿ ಇನ್ನಷ್ಟು ಸಮಸ್ಯೆಗೆ ಎಳೆಯಲಿದ್ದಾರೆ. ಕಾನೂನಿಗೆ ಸಂಬಂಧಿಸಿದ ವಿಚಾರಗಳಲ್ಲಿ ತೊಡಗಿಕೊಳ್ಳಬೇಕಾದ ಅಗತ್ಯ ಕಂಡುಬರುತ್ತದೆ. ಶುಭದಿನ 07. ಚಂಡಿ ಪಾರಾಯಣ ಮಾಡಿರಿ.

ವಾರದ ಆರಂಭದಿಂದಲೇ ನಿಮ್ಮ ಕೆಲಸಗಳಿಗೆ ವೇಗ ನೀಡುತ್ತೀರಿ. ನಿಮ್ಮ ಕಾರ್ಯ ಯೋಜನೆಗಳನ್ನು ಅಂತಿಮಗೊಳಿಸಲು ನೆರವು ಸಿಗುತ್ತದೆ. ಇದರಿಂದ ನಿಮ್ಮ ಕೆಲಸ ಇನ್ನಷ್ಟು ಪರಿಣಾಮಕಾರಿಯಾಗಿ ಮಾಡಲು ಸಾಧ್ಯವಾಗುತ್ತದೆ. ವೈವಾಹಿಕ ಜೀವನವು ಸಂತಸದಾಯಕವಾಗಿರುತ್ತದೆ. ವ್ಯಾಪಾರಕ್ಕೆ ಸಂಬಂಧಿಸಿದ ಕೆಲಸ ಪೂರ್ಣಗೊಳಿಸಲು ಸಾಧ್ಯವಾಗುತ್ತದೆ. ಶುಭದಿನ 08. ಶ್ರೀ ಲಕ್ಷ್ಮೀ ನರಸಿಂಹ ಪಂಚರತ್ನ ಓದಿರಿ.







ನಿಮ್ಮ ಕೆಲಸ ಕಾರ್ಯಗಳನ್ನು ಪೂರ್ಣಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುತ್ತೀರಿ. ಬೇರೊಬ್ಬರ ಮೇಲಿನ ಅವಲಂಬನೆ ಕಡಿಮೆ ಆಗುತ್ತದೆ. ಆದರೆ ಸಲಕರಣೆಗಳ ಖರೀದಿಗೆ ಹೆಚ್ಚಿನ ಹಣ ಖರ್ಚಾಗಲಿದೆ. ಹಣ ಹೂಡಿಕೆ ವ್ಯವಹಾರದಲ್ಲಿ ಅನುಕೂಲ ಆಗಲಿದೆ. ಈ ಅವಧಿಯಲ್ಲಿ ದೈಹಿಕ ಸಮಸ್ಯೆಗಳು ಕಾಡಬಹುದು. ಸಾಲ ಮರು ಪಾವತಿಯಲ್ಲಿ ಸಮಸ್ಯೆ ಎದುರಾಗುತ್ತದೆ. ಶುಭದಿನ 09. ವಿಷ್ಣು ಸಹಸ್ರನಾಮ ಪಠಿಸಿರಿ.

ಆದಾಯದಲ್ಲಿ ಹೆಚ್ಚಳ ಆಗುತ್ತದೆ. ಆ ಮೂಲಕ ಜೀವನ ಮಟ್ಟ ಉತ್ತಮಗೊಳ್ಳಲಿದೆ. ಈ ವಾರ ಕೆಲವು ಉಪಯುಕ್ತ ಸಂಪನ್ಮೂಲಗಳನ್ನು ಕ್ರೋಢೀಕರಿಸಲು ಸಾಧ್ಯವಾಗುತ್ತದೆ. ವಿವಿಧ ಆದಾಯ ಮೂಲಗಳಿಂದ ಅನುಕೂಲ ಒದಗಿ ಬರಲಿದೆ. ಇದರಿಂದ ನಿಮಗೆ ಸಂತೋಷವಾಗುತ್ತದೆ. ನಿಮ್ಮ ಸಂಗಾತಿಯ ಭಾವನೆಗಳನ್ನು ಅರ್ಥ ಮಾಡಿಕೊಳ್ಳುವಲ್ಲಿ ಯಶಸ್ವಿ ಆಗುತ್ತೀರಿ. ಶುಭದಿನ 06. ಶಿವಕವಚ ಪಠಣ ಮಾಡಿರಿ.







ವೃತ್ತಿಪರ ಬದುಕಿನಲ್ಲಿ ಹಲವು ಅವಕಾಶಗಳು ನಿಮಗೆ ದೊರೆಯಲಿವೆ. ಇದರಿಂದ ನಿಮ್ಮ ಉತ್ಸಾಹ ಹೆಚ್ಚಾಗಲಿದೆ. ಈ ಹಿಂದೆ ನಿಮ್ಮನ್ನು ಮಾನಸಿಕವಾಗಿ ಚಿಂತೆಗೀಡು ಮಾಡಿದ್ದ ವಾತಾವರಣವು ಕರಗಲಿದೆ. ಈ ಅವಧಿಯಲ್ಲಿ ನಿಮ್ಮ ಆರೋಗ್ಯ ಅನುಕೂಲಕರವಾಗಿ ಪರಿಣಮಿಸಲಿದೆ. ಆಹಾರ ಪಥ್ಯವನ್ನು ಅನುಸರಿಸಿ. ಉದ್ಯೋಗದಲ್ಲಿ ಬಡ್ತಿ ಸಿಗುವ ಸಾಧ್ಯತೆ ಇದೆ. ಶುಭದಿನ 08. ರಾಘವೇಂದ್ರ ಸ್ವಾಮಿ ಭಜನೆ ಮಾಡಿರಿ.

ಈ ಹಿಂದೆ ಪೂರ್ಣಗೊಳಿಸಲು ಸಾಧ್ಯವಾಗದಂಥ ಹಲವು ಕೆಲಸ ಕಾರ್ಯಗಳನ್ನು ಪೂರ್ಣಗೊಳಿಸಲು ಆಗುತ್ತದೆ. ವಾರದ ಮೊದಲ ಭಾಗವು ಆರೋಗ್ಯದ ಮೇಲೆ ಅಡ್ಡ ಪರಿಣಾಮ ಬೀರುತ್ತದೆ. ಇದರಿಂದ ನಿಮಗೆ ಚಿಂತೆ ಉಂಟಾಗುತ್ತದೆ. ವಾರದ ದ್ವಿತೀಯಾರ್ಧದಲ್ಲಿ ಆರೋಗ್ಯದಲ್ಲಿ ಚೇತರಿಕೆ ಕಾಣುತ್ತದೆ. ಕೆಲಸಗಳನ್ನು ಇನ್ನೂ ವೇಗವಾಗಿ ಮಾಡಲು ಸಾಧ್ಯವಾಗುತ್ತದೆ. ಶುಭದಿನ 06. ಕಾರ್ತಿಕೇಯ ಸ್ತೋತ್ರ ಪಠಣ ಮಾಡಿರಿ.

